ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

File No:DTE-ADMI0ACM2/19 /2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:10-06-2022.

**-:: ಸುತ್ತೋಲೆ ::-**

**ವಿಷಯ:-** 2021-22ನೇ ಸಾಲಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ **ಅರೆಕಾಲಿಕ (ಪಾರ್ಟ್-ಟೈಮ್) ಡಿಪ್ಲೋಮಾ ಕೋರ್ಸುಗಳ ಪ್ರವೇಶಾವಧಿಯನ್ನು ವಿಸ್ತರಿಸುವ** ಬಗ್ಗೆ.

**ಉಲ್ಲೇಖ:-**
1. ಈ ಕಛೇರಿ ಸಮಸಂಖ್ಯೆ ಪ್ರವೇಶಾಧಿಸೂಚನೆ ದಿ:24-03-2022.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:28-04-2022
3. ಪ್ರಾಂಶುಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಸ್‌ಜೆಇಪಿ/02ಪ್ರವೇಶ/2021, ದಿ:16-05-2022.
4. ಪ್ರಾಂಶುಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು, ಇವರ ಪತ್ರ ಸಂ. ಎಂಇಐಇಪಿ/ಪ್ರವೇಶ/2022/08, ದಿ:16-05-2022.

**********

ಉಲ್ಲೇಖ(2)ರ ಈ ಕಛೇರಿ ಸುತ್ತೋಲೆಯಲ್ಲಿ ಎರಡು ವರ್ಷಗಳ ಐ.ಟಿ.ಐ/ದ್ವಿತೀಯ ಪಿಯುಸಿ(ವಿಜ್ಞಾನ/ ತಾಂತ್ರಿಕ ವಿಷಯಗಳು)ಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ 2021-22ನೇ ಸಾಲಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಅರೆಕಾಲಿಕ (ಪಾರ್ಟ್-ಟೈಮ್) ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ದಿ:10-05-2022 ಎಂದು ಕೊನೆಯ ದಿನಾಂಕವನ್ನಾಗಿ ನಿಗದಿಪಡಿಸಲಾಗಿತ್ತು.

ಉಲ್ಲೇಖ(3) & (4)ರ ಪ್ರಾಂಶುಪಾಲರ ಪತ್ರದಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿಯೇ ಪ್ರವೇಶ ಮಾಡಿಕೊಳ್ಳಲು ಪ್ರವೇಶ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಪ್ರಿನ್ಸಿಪಾಲರುಗಳ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ **ಅರ್ಜಿ ಪಡೆಯುವ ಮತ್ತು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:14-06-2022ರವರೆಗೆ** ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ. ನಿಯಮಗಳ ಪ್ರಕಾರ **ದಿ:15-06-2022** ರ ಒಳಗೆ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪೂರ್ಣಗೊಳಿಸತಕ್ಕದ್ದು.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

10/6/22

ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು
3. ಪ್ರಿನ್ಸಿಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು

**ಪ್ರತಿ ಮಾಹಿತಿಗಾಗಿ:-**

1) ಮಾನ್ಯ ಆಯುಕ್ತರ ಆಪ್ತಶಾಖೆಗೆ.
2) ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6) ಡಿವಿಪಿ (1) & (2) ವಿಭಾಗಕ್ಕೆ ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. 7)ಕಡತಕ್ಕೆ

Scanned with CamScanner